# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 449 |
| 2 | ಸದಸ್ಯರ ಹೆಸರು | : | ಶ್ರೀ ಯು. ಬಿ. ವೆಂಕಟೇಶ್ (ನಾಮ ನಿರ್ದೇಶನ ಹೊಂದಿದವರು) |
| 3 | ಉತ್ತರಿಸುವ ದಿನಾಂಕ | : | 16-12-2021 |
| 4 | ಉತ್ತರಿಸುವವರು | : | ಮುಖ್ಯಮಂತ್ರಿಗಳು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರಾಜಧಾನಿ ಬೆಂಗಳೂರಿನಲ್ಲಿ ಸತತ ಎಡಬಿಡದೆ ಸುರಿದ ಮಳೆಗೆ ಕಟ್ಟಡಗಳು ಕುಸಿದು ಬೀಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು. |
| ಆ | ಈವರೆಗೆ ಎಷ್ಟು ಕಟ್ಟಡಗಳು ಕುಸಿದು ಬಿದ್ದಿರುವುದು ವರದಿಯಾಗಿದೆ; ಮತ್ತು ಎಷ್ಟು ಕಟ್ಟಡಗಳು ಕುಸಿದು ಬೀಳುವ ಅಪಾಯದ ಅಂಚಿನಲ್ಲಿದೆ; ಈ ಸಂಬಂಧ ಸಮೀಕ್ಷೆ ಕೈಗೊಳ್ಳಲಾಗಿದೆಯೇ; | ಈವರೆಗೆ ಒಟ್ಟು 18 ಕಟ್ಟಡಗಳು ಕುಸಿದು ಬಿದ್ದಿರುವುದು ವರದಿಯಾಗಿರುತ್ತದೆ. ಕುಸಿದು ಬೀಳುವ ಅಪಾಯದ ಅಂಚಿನಲ್ಲಿರುವ ಕಟ್ಟಡಗಳ ಸಮೀಕ್ಷೆ ಕಾರ್ಯವನ್ನು ಕೈಗೊಳ್ಳಲಾಗಿದ್ದು, ಒಟ್ಟು 428 ಕಟ್ಟಡಗಳು ಕುಸಿದು ಬೀಳುವ ಅಪಾಯದ ಅಂಚಿನಲ್ಲಿರುವುದು ಸಮೀಕ್ಷೆಯಿಂದ ಕಂಡುಬಂದಿರುತ್ತದೆ. |
| ಇ | ಅಪಾಯದ ಅಂಚಿನಲ್ಲಿರುವ ಕಟ್ಟಡಗಳನ್ನು ತೆರವುಗೊಳಿಸಿ ನೆಲಸಮಗೊಳಿಸಲು ಹಾಗೂ ಸೂಕ್ತ ಪರಿಹಾರ ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಅಪಾಯದ ಅಂಚಿನಲ್ಲಿರುವ ಕಟ್ಟಡಗಳನ್ನು ತೆರವುಗೊಳಿಸುವ ಸಂಬಂಧ ಬಿಬಿಎಂಪಿ ಕಾಯ್ದೆ 2020 ರನ್ವಯ ಕ್ರಮವಹಿಸಲಾಗುತ್ತಿರುತ್ತದೆ. ಮಳೆಯಿಂದಾಗಿ ಹಾನಿಗೊಳಗಾದ ಮನೆಗಳ ಪುನರ್ ನಿರ್ಮಾಣ / ದುರಸ್ಥಿ ಕಾರ್ಯವನ್ನು ಕೈಗೊಳ್ಳುವುದರ ಕುರಿತು ಪರಿಹಾರ ನೀಡುವುದರ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ: ಕಂಇ 355 ಟಿಎನ್ಆರ್ 2021, ದಿನಾಂಕ: 13-08-2021 ರಂತೆ ಕ್ರಮ ಕೈಗೊಳ್ಳಲಾಗುತ್ತಿರುತ್ತದೆ. |

ಸಂಖ್ಯೆ: ನಅಇ 387 ಎಂಎನ್‌ಯು 2021

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ